## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದ 189 ಗ್ರಾಮೀಣ ವಿಧಾನಸಭಾ ಕ್ಷೇತಗಳ ವ್ಯಾಪ್ತಿಯಲ್ಲಿ 4290 ಕಿ.ಮೀ. ಉದ್ದದ ರಸ್ತೆಗಳನ್ನು ರೂ.3261.00 ಕೋಟಿಗಳಲ್ಲಿ ಅನುಷ್ಠಾನಕ್ಕೆ ತರುವ ಗಾಂಧಿ ಪಥ ಗ್ರಾಮ ಪಥ (ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆ ಹಂತ-4) ಯೋಜನೆಗೆ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ: ದಿನಾಂಕ:28-9-2016ರ ಸಚಿವ ಸಂಪುಟದ ನಿರ್ಣಯ ಪ್ರಕರಣ ಸಂಖ್ಯೆ:ಸಿ:479/2016.

**ಪ್ರಸ್ತಾವನೆ:**

ರಾಜ್ಯದಲ್ಲಿ ಗ್ರಾಮೀಣ ರಸ್ತೆಗಳ ಒಟ್ಟು ಉದ್ದ 177542.00 ಕಿ.ಮೀ. ಇದ್ದು, ಈ ಪೈಕಿ ಶೇ.50 ಕ್ಕಿಂತ ಹೆಚ್ಚಿರುವ ಗ್ರ್ಯಾವೆಲ್/ಮಣ್ಣಿನ ಮೇಲ್ಮೈವುಳ್ಳ ರಸ್ತೆಗಳನ್ನು ಅಭಿವೃದ್ಧಿಪಡಿಸಿ ಉನ್ನತೀಕರಿಸುವುದು (Upgradation) ಅತಿ ಪ್ರಾಮುಖ್ಯತೆಯ ಅಂಶವಾಗಿರುತ್ತದೆ.

ಈ ಹಿನ್ನೆಲೆಯಲ್ಲಿ ರಾಜ್ಯದ 189 ಗ್ರಾಮೀಣ ವಿಧಾನ ಸಭಾ ಕ್ಷೇತ್ರಗಳಲ್ಲಿ ತಲಾ 50 ಕಿ.ಮೀ.ನಂತೆ ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆಯಡಿ 10000 ಕಿ.ಮೀ. ಗ್ರಾಮೀಣ ರಸ್ತೆಗಳನ್ನು 2010-11ನೇ ಸಾಲಿನಲ್ಲಿ ಮೊದಲ ಹಂತದಲ್ಲಿ ತಲಾ 20 ಕಿ.ಮೀ.ನಂತೆ ಮತ್ತು 2ನೇ ಹಂತದಲ್ಲಿ 30 ಕಿ.ಮೀ.ನಂತೆ ಅಭಿವೃದ್ಧಿಪಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಾಗಿತ್ತು. ಇದಕ್ಕೆ ಮುಂದುವರೆದಂತೆ 2013-14ನೇ ಸಾಲಿನಲ್ಲಿ 189 ಮತಕ್ಷೇತ್ರಗಳಲ್ಲಿ ತಲಾ 20 ಕಿ.ಮೀ. ನಂತೆ ಒಟ್ಟು 3855.23ಕಿ.ಮೀ. ರಸ್ತೆಗಳನ್ನು 3ನೇ ಹಂತದಲ್ಲಿ ಅಭಿವೃದ್ಧಿಪಡಿಸಲಾಗುತ್ತಿದೆ.

ಮುಂದುವರೆದಂತೆ, ಪ್ರಸ್ತುತ 2016-17 ನೇ ಸಾಲಿನ ಆಯವ್ಯಯ ಭಾಷಣದಲ್ಲಿ 'ಗಾಂಧಿ ಪಥ-ಗ್ರಾಮ ಪಥ'(ನಮ್ಮ ಗ್ರಾಮ- ನಮ್ಮ ರಸ್ತೆ ಯೋಜನೆ ಹಂತ- 4) ರಲ್ಲಿ ಪ್ರತಿ ಗ್ರಾಮೀಣ ವಿಧಾನಸಭಾ ಕ್ಷೇತ್ರದಲ್ಲಿ 20 ಕಿ.ಮೀ.ನಂತೆ 189 ಗ್ರಾಮೀಣ ವಿಧಾನಸಭಾ ಕ್ಷೇತ್ರಗಳಿಗೆ ಯೋಜನೆಯನ್ನು ರೂಪಿಸಿ ಎಲ್ಲಾ ಪೂರ್ವಸಿದ್ಧತಾ ಕಾರ್ಯಗಳನ್ನು ಕೈಗೊಳ್ಳಲಾಗುವುದು. ಇದರಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನಸಾಂದ್ರತೆ ಹೆಚ್ಚಾಗಿರುವ ಗ್ರಾಮಗಳಿಗೆ ಅನುಕ್ರಮವಾಗಿ 6 ಕಿ.ಮೀ. ಮತ್ತು 3 ಕಿ.ಮೀ ಸಂಪರ್ಕ ರಸ್ತೆ ನಿರ್ಮಾಣ ಕಾರ್ಯವು ಸೇರಿದೆ. ಈ ಕಾರ್ಯಕ್ರಮದ ಮೂಲಕ ಹಳ್ಳಿಯಿಂದ ಮುಖ್ಯ ರಸ್ತೆಯನ್ನು ಜೋಡಿಸಲು ಸರ್ವಋತು ಸಂಪರ್ಕ ರಸ್ತೆಯನ್ನು ನಿರ್ಮಿಸಲು ಒತ್ತು ನೀಡಲಾಗುವುದು ಎಂದು ಘೋಷಿಸಲಾಗಿದೆ.

ಅದರಂತೆ, ರಾಜ್ಯದ 189 ಗ್ರಾಮೀಣ ವಿಧಾನ ಸಭಾ ಮತಕ್ಷೇತ್ರಗಳ ಪೈಕಿ 144 ವಿಧಾನ ಸಭಾ ಕ್ಷೇತ್ರಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದ ಜನ ಹೆಚ್ಚು ಇರುವ ಪ್ರದೇಶಗಳಲ್ಲಿ ಕ್ರಮವಾಗಿ 6 ಕಿ.ಮೀ. ಮತ್ತು 3 ಕಿ.ಮೀ. ಒಳಗೊಂಡಂತೆ ತಲಾ 20 ಕಿ.ಮೀ.ನಂತೆ ಒಟ್ಟು 2880ಕಿ.ಮೀ. ರಸ್ತೆ ಅಭಿವೃದ್ಧಿಪಡಿಸಲು

ಎರಡು ಪೂರ್ಣ ತಾಲ್ಲೂಕು ಮತ್ತು ಅದಕ್ಕೂ ಹೆಚ್ಚಿನ ವ್ಯಾಪ್ತಿ ಹೊಂದಿರುವ 12 ವಿಧಾನ ಸಭಾ ಕ್ಷೇತ್ರಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದ ಜನ ಹೆಚ್ಚು ಇರುವ ಪ್ರದೇಶಗಳಲ್ಲಿ ಕ್ರಮವಾಗಿ 6 ಕಿ.ಮೀ. ಮತ್ತು 3 ಕಿ.ಮೀ. ಒಳಗೊಂಡಂತೆ ತಲಾ 35 ಕಿ.ಮೀ.ನಂತೆ ಒಟ್ಟು 420ಕಿ.ಮೀ.ಗಳನ್ನು ರಸ್ತೆ ಅಭಿವೃದ್ಧಿಪಡಿಸಲು

ಒಂದು ಪೂರ್ಣ ತಾಲ್ಲೂಕು ಮತ್ತು ಇನ್ನೊಂದು ತಾಲ್ಲೂಕಿನ ಭಾಗದ ವ್ಯಾಪ್ತಿ ಹೊಂದಿರುವ 33 ಕ್ಷೇತ್ರಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದ ಜನ ಹೆಚ್ಚು ಇರುವ ಪ್ರದೇಶಗಳಲ್ಲಿ ಕ್ರಮವಾಗಿ 6 ಕಿ.ಮೀ. ಮತ್ತು 3 ಕಿ.ಮೀ. ಒಳಗೊಂಡಂತೆ ತಲಾ 30 ಕಿ.ಮೀ.ನಂತೆ ಒಟ್ಟು 990ಕಿ.ಮೀ. ರಸ್ತೆಗಳನ್ನು ಆಯ್ಕೆ ಮಾಡಿ ಅಭಿವೃದ್ಧಿಪಡಿಸುವುದು ಅಗತ್ಯವಿರುವುದರಿಂದ ಗಾಂಧಿ ಪಥ - ಗ್ರಾಮ ಪಥ

(ನಮ್ಮ ಗ್ರಾಮ ನಮ್ಮ ರಸ್ತೆ ಹಂತ-4) ಯೋಜನೆಯಲ್ಲಿ ಒಟ್ಟು 4290 ಕಿ.ಮೀ. ಉದ್ದದ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಯೋಜಿಸಿದ್ದು, ಪ್ರತಿ ಕಿ.ಮೀ. ರಸ್ತೆ ಅಭಿವೃದ್ಧಿಗೆ ರೂ.76.00 ಲಕ್ಷಗಳಂತೆ ಒಟ್ಟು 4290 ಕಿ.ಮೀ. ರಸ್ತೆ ಅಭಿವೃದ್ಧಿಗೆ ರೂ.3261.00 ಕೋಟಿಗೆ ಅಂದಾಜಿಸಲಾಗಿರುತ್ತದೆ.

ಈ ಯೋಜಿತ 'ಗಾಂಧಿ ಪಥ-ಗ್ರಾಮ ಪಥ'(ನಮ್ಮ ಗ್ರಾಮ- ನಮ್ಮ ರಸ್ತೆ ಯೋಜನೆ ಹಂತ- 4) ಕಾರ್ಯಕ್ರಮದಡಿ ರಾಜ್ಯದ 189 ಗ್ರಾಮೀಣ ವಿಧಾನ ಸಭಾ ಮತಕ್ಷೇತ್ರಗಳ ವ್ಯಾಪ್ತಿಯಲ್ಲಿ ಒಟ್ಟಾರೆ 4290 ಕಿ.ಮೀ. ಉದ್ದದ ರಸ್ತೆಗಳನ್ನು ಒಟ್ಟು ರೂ.3261.00 ಕೋಟಿಗಳ ಅಂದಾಜು ಮೊತ್ತದಲ್ಲಿ ಅಭಿವೃದ್ಧಿಪಡಿಸುವ ಕ್ರಿಯಾ ಯೋಜನೆ ರೂಪಿಸಲು (DPRs ಗಳನ್ನು ತಯಾರಿಸಲು) ಹಾಗೂ KTPP ಕಾಯ್ದೆಯಡಿ ಟೆಂಡರ್ ಕರೆದು ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಹಾಗೂ ಆಯ್ಕೆ ಮಾಡುವ ರಸ್ತೆಗಳನ್ನು ಮತ್ತು ರಸ್ತೆಗಳ DPRs ಗಳನ್ನು ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ -IIರ ಮಾನದಂಡಗಳನ್ನು ಅನುಸರಿಸಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ ಮುಖಾಂತರ ಅನುಷ್ಠಾನಗೊಳಿಸುವ ಸದರಿ ವಿಷಯಕ್ಕೆ ದಿನಾಂಕ:28-9-2016ರಂದು ನಡೆದ ಸಚಿವ ಸಂಪುಟವು ಅನುಮೋದನೆ ನೀಡಿರುತ್ತದೆ. ಅದರಂತೆ, ಈ ಕಾರ್ಯ ಯೋಜನೆಯನ್ನು ಕೈಗೊಂಡು ಮುಂದಿನ ಕ್ರಮ ವಹಿಸಲು ಹಾಗೂ ಈ ಯೋಜನೆಯನ್ನು ಜಾರಿಗೊಳಿಸಲು ಸರ್ಕಾರವು ತೀರ್ಮಾನಿಸಿರುತ್ತದೆ.

ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:44:ಆರ್‌ಆರ್‌ಸಿ:2016, ಬೆಂಗಳೂರು, ದಿನಾಂಕ:13-10-2016.**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ರಾಜ್ಯದ 189 ಗ್ರಾಮೀಣ ವಿಧಾನ ಸಭಾ ಮತಕ್ಷೇತ್ರಗಳ ವ್ಯಾಪ್ತಿಯಲ್ಲಿ ಗಾಂಧಿ ಪಥ – ಗ್ರಾಮ ಪಥ (ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆ ಹಂತ-4) ಯೋಜನೆಯಲ್ಲಿ ಕೆಳಕಂಡಂತೆ ಒಟ್ಟು 4290 ಕಿ.ಮೀ. ರಸ್ತೆಗಳನ್ನು ರೂ.3261.00 ಕೋಟಿಗಳ ಅಂದಾಜು ಮೊತ್ತದಲ್ಲಿ ಅಭಿವೃದ್ಧಿಪಡಿಸಲು ಕ್ರಿಯಾ ಯೋಜನೆ ರೂಪಿಸಲು(DPRs ಗಳನ್ನು ತಯಾರಿಸಲು) ಹಾಗೂ KTPP ಕಾಯ್ದೆಯಡಿ ಟೆಂಡರ್ ಕರೆದು ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಹಾಗೂ ಆಯ್ಕೆ ಮಾಡುವ ರಸ್ತೆಗಳನ್ನು ಮತ್ತು ರಸ್ತೆಗಳ DPRs ಗಳನ್ನು ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ -IIರ ಮಾನದಂಡಗಳನ್ನು ಅನುಸರಿಸಿ, ಕೆಳಕಂಡ ಅಂಶಗಳನ್ನು ಹಾಗೂ ಷರತ್ತುಗಳನ್ನು ಅಳವಡಿಸಿಕೊಂಡು ಯೋಜನೆಯನ್ನು ಜಾರಿಗೆ ತರಲು ಆದೇಶಿಸಿದೆ.

1) 144 ವಿಧಾನ ಸಭಾ ಕ್ಷೇತ್ರಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದ ಜನ ಹೆಚ್ಚು ಇರುವ ಪ್ರದೇಶಗಳಲ್ಲಿ ಕ್ರಮವಾಗಿ 6 ಕಿ.ಮೀ. ಮತ್ತು 3 ಕಿ.ಮೀ. ಒಳಗೊಂಡಂತೆ ತಲಾ 20 ಕಿ.ಮೀ.ನಂತೆ ಒಟ್ಟು 2880 ಕಿ.ಮೀ. ರಸ್ತೆ ಅಭಿವೃದ್ಧಿಪಡಿಸಲು

2) ಎರಡು ಪೂರ್ಣ ತಾಲ್ಲೂಕು ಮತ್ತು ಅದಕ್ಕೂ ಹೆಚ್ಚಿನ ವ್ಯಾಪ್ತಿ ಹೊಂದಿರುವ (6 ವಿಧಾನಸಭಾ ಕ್ಷೇತ್ರಗಳು) ಹಾಗೂ 1 ಪೂರ್ಣ ತಾಲ್ಲೂಕು ಮತ್ತು 2 ಭಾಗಶಃ ತಾಲ್ಲೂಕು (6 ವಿಧಾನಸಭಾ ಕ್ಷೇತ್ರಗಳು) ಸೇರಿರುವ ಒಟ್ಟು 12 ವಿಧಾನ ಸಭಾ ಕ್ಷೇತ್ರಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದ ಜನ ಹೆಚ್ಚು ಇರುವ ಪ್ರದೇಶಗಳಲ್ಲಿ ಕ್ರಮವಾಗಿ 6 ಕಿ.ಮೀ. ಮತ್ತು 3 ಕಿ.ಮೀ. ಒಳಗೊಂಡಂತೆ ತಲಾ 35 ಕಿ.ಮೀ.ನಂತೆ ಒಟ್ಟು 420 ಕಿ.ಮೀ.ಗಳನ್ನು ರಸ್ತೆ ಅಭಿವೃದ್ಧಿಪಡಿಸಲು

3) ಒಂದು ಪೂರ್ಣ ತಾಲ್ಲೂಕು ಮತ್ತು ಇನ್ನೊಂದು ತಾಲ್ಲೂಕಿನ ಭಾಗದ ವ್ಯಾಪ್ತಿ ಹೊಂದಿರುವ 33 ಕ್ಷೇತ್ರಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡದ ಜನ ಹೆಚ್ಚು ಇರುವ ಪ್ರದೇಶಗಳಲ್ಲಿ ಕ್ರಮವಾಗಿ 6 ಕಿ.ಮೀ. ಮತ್ತೆ 3 ಕಿ.ಮೀ. ಒಳಗೊಂಡಂತೆ ತಲಾ 30 ಕಿ.ಮೀ.ನಂತೆ ಒಟ್ಟು 990 ಕಿ.ಮೀ. ರಸ್ತೆಗಳನ್ನು ಆಯ್ಕೆ ಮಾಡಿ ಅಭಿವೃದ್ಧಿಪಡಿಸಲು ಹಾಗೂ

ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ ಮುಖಾಂತರ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುವಂತೆ ಆದೇಶಿಸಲು ಸರ್ಕಾರವು ಹರ್ಷಿಸುತ್ತದೆ. ಈ ಯೋಜನೆ ಅನುಷ್ಠಾನವನ್ನು ಕೆಳಕಂಡ ಷರತ್ತುಗೊಳಪಡಿಸಿದೆ.

**ಷರತ್ತುಗಳು:**

1. ಗಾಂಧಿ ಪಥ – ಗ್ರಾಮ ಪಥ (ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆ ಹಂತ-4) ಯೋಜನೆಗೆ ಪ್ರತಿ ಕಿ.ಮೀ. ರಸ್ತೆ ಅಭಿವೃದ್ಧಿಗೆ ಅಂದಾಜು ರೂ.76.00ಲಕ್ಷದಂತೆ 4290 ಕಿ.ಮೀ. ರಸ್ತೆ ಅಭಿವೃದ್ಧಿಗೆ ರೂ.3261.00 ಕೋಟಿಗಳಲ್ಲಿ ಅಭಿವೃದ್ಧಿಪಡಿಸುವುದು.

2. ಯೋಜನೆಯಲ್ಲಿ ಪ್ರತಿ ಗ್ರಾಮೀಣ ವಿಧಾನಸಭಾ ಕ್ಷೇತ್ರದಲ್ಲಿನ ಗ್ರಾಮಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಕಾಲೋನಿಗಳಿಗೆ ಸಂಪರ್ಕ ಕಲ್ಪಿಸಲು ಅನುಕ್ರಮವಾಗಿ 6 ಕಿ.ಮೀ. ಮತ್ತು 3 ಕಿ.ಮೀ ಕಡ್ಡಾಯವಾಗಿ ಆಯ್ಕೆ ಮಾಡುವುದು. ಅದರಂತೆ ರಸ್ತೆ ನಿರ್ಮಾಣ ಕೈಗೊಂಡು ಪರಿಶಿಷ್ಟ ಜಾತಿ ಮತ್ತು ಪಂಗಡದ ಜನಾಂಗದವರು ವಾಸಿಸುವ ಕಾಲೋನಿಗಳಿಗೆ ಮುಖ್ಯರಸ್ತೆಯಿಂದ ಕೂಡು ರಸ್ತೆ ಸೌಲಭ್ಯ ಕಲ್ಪಿಸುವಂತೆ ಕ್ರಮ ಕೈಗೊಳ್ಳುವುದು.

3. ಗಾಂಧಿ ಪಥ – ಗ್ರಾಮ ಪಥ (ನಮ್ಮ ಗ್ರಾಮ ನಮ್ಮ ರಸ್ತೆ ಯೋಜನೆ ಹಂತ-4) ಯೋಜನೆಗೆ ರಸ್ತೆಗಳನ್ನು ಆಯ್ಕೆ ಮಾಡುವ ಸಂದರ್ಭದಲ್ಲಿ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಮಾನ್ಯ ಶಾಸಕರ ಪ್ರಸ್ತಾವನೆಗಳು/ಜನಪ್ರತಿನಿಧಿಗಳ ಕೋರಿಕೆಗಳನ್ನು ಸಹ ಪರಿಗಣಿಸುವುದು ಮತ್ತು ರಸ್ತೆಗಳನ್ನು ಅಭಿವೃದ್ಧಿ ಪಡಿಸಲು ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ-IIರ ಮಾನದಂಡಗಳನ್ನು ಅನುಸರಿಸಿಯೇ ಮಾಡತಕ್ಕದ್ದು.

4. ಹಿಂದಿನ ಮೌಲ್ಯಮಾಪನದ ವರದಿಗಳಿಂದ ಕಲಿತ ಅನುಭವಗಳನ್ನು DPR ತಯಾರಿಕೆಯಲ್ಲಿ ತಪ್ಪದೆ ಅಳವಡಿಸತಕ್ಕದ್ದು ಹಾಗೂ ಯೋಜನಾ ವರದಿಗಳನ್ನು (DPR) ರಾಜ್ಯ ತಾಂತ್ರಿಕ ಸಮಲೋಚಕರಿಂದ/ಇಲಾಖಾ ವತಿಯಿಂದ ತಯಾರಿಸಿಕೊಂಡು ಅನುಮೋದಿತ ರಾಜ್ಯ ತಾಂತ್ರಿಕ ಸಂಸ್ಥೆ (STA) ಗಳಿಂದ ಪರಿಶೀಲಿಸಿಕೊಂಡು ಆಡಳಿತಾತ್ಮಕ ಅನುಮೋದನೆಗೆ ಸರ್ಕಾರಕ್ಕೆ ಸಲ್ಲಿಸುವುದು.

5. ಗಾಂಧಿ ಪಥ – ಗ್ರಾಮ ಪಥ ಯೋಜನೆಯ ಡಿಪಿಆರ್ ತಯಾರಿಕೆಗೆ ಬೇಕಾಗುವ ರೂ.12.75 ಕೋಟಿ ಅನುದಾನವನ್ನು 2016-17ನೇ ಸಾಲಿಗೆ ಇಲಾಖೆಗೆ ಲೆಕ್ಕ ಶೀರ್ಷಿಕೆ- "3054-04-337-1-12 Revenue Releases to GPs – Rural Roads" ಅಡಿ ಒದಗಿಸಿದ ಅನುದಾನದಲ್ಲಿ ಭರಿಸುವುದು.

6. ರಸ್ತೆಗಳ ಆಯ್ಕೆ ಪ್ರಕ್ರಿಯೆಗಳು ಮುಕ್ತಾಯಗೊಂಡ ನಂತರ ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆಯ ಮಾನದಂಡಗಳಂತೆ ಆಯ್ಕೆಯಾದ ರಸ್ತೆಗಳ DPRs ಗಳನ್ನು ತಯಾರಿಸಿ ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆಯುವುದು.

7. ಎಸ್‌ಸಿಪಿ/ಟಿಎಸ್‌ಪಿ ಯೋಜನೆಯ ಕ್ರಿಯಾ ಯೋಜನೆಗೆ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಗಳ ನೋಡಲ್ ಏಜೆನ್ಸಿಯ ಅನುಮೋದನೆಯನ್ನು ಸಹ ಪಡೆಯಲು ಕ್ರಮ ಕೈಗೊಳ್ಳುವುದು.

8. ಗಾಂಧಿ ಪಥ ಗ್ರಾಮ ಪಥ ಯೋಜನೆಯ ರಸ್ತೆಗಳ DPRs ಗಳನ್ನು ತಯಾರಿಸುವಾಗ, ನಿರ್ಮಾಣ ಮಾಡುವಾಗ 5 ವರ್ಷಗಳ ನಿರ್ವಹಣೆಯು ಒಳಗೊಂಡಂತೆ, ನಂತರ ಒಂದು ಸಲ ಮರು ಡಾಂಬರೀಕರಣ (Renewals) ಮಾಡುವಾಗಲೂ ಸಹಿತ PMGSY-IIರ ನಿಯಮಗಳನ್ನು (Norms) ಕಡ್ಡಾಯವಾಗಿ ಪಾಲಿಸುವುದು.

9. ಗುಣಮಟ್ಟ ಕಾಪಾಡುವ ಹಾಗೂ ಪಾರದರ್ಶಕತೆ ದೃಷ್ಟಿಯಿಂದ ಆಯ್ಕೆಗೊಂಡ ಗ್ರಾಮೀಣ ಮತಕ್ಷೇತ್ರದ ರಸ್ತೆ ಕಾಮಗಾರಿಗಳನ್ನು ಒಟ್ಟುಗೂಡಿಸಿ ರೂ.15.00ಕೋಟಿ ರಿಂದ 25.00 ಕೋಟಿಗಳಿಗೆ ಕಾಮಗಾರಿಗಳ ಗುಂಪು ರಚಿಸಿ (Package Tender) e-tender ಮೂಲಕ ಗುತ್ತಿಗೆದಾರರನ್ನು ನೇಮಿಸಿ ಅನುಷ್ಠಾನಗೊಳಿಸುವುದು.

10. ಗುಣಮಟ್ಟದ ರಸ್ತೆಗಳ ನಿರ್ಮಾಣಕ್ಕಾಗಿ PMGSY-II ರಡಿ ಅಳವಡಿಸಿಕೊಂಡಿರುವ 3 ಹಂತದ ಗುಣಮಟ್ಟ ನಿಯಂತ್ರಣ ವ್ಯವಸ್ಥೆಯನ್ನು ಕಡ್ಡಾಯವಾಗಿ ಅಳವಡಿಸಿಕೊಳ್ಳುವುದು.

11. ಗಾಂಧಿ ಪಥ ಗ್ರಾಮ ಪಥ ಯೋಜನೆಯಡಿ ಅನುಷ್ಠಾನಗೊಳಿಸುತ್ತಿರುವ ಅನುಮೋದನೆಗೊಂಡ ಕ್ರಿಯಾ ಯೋಜನೆಯಲ್ಲಿರುವ ಎಲ್ಲಾ ಕಾಮಗಾರಿಗಳ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಕಡ್ಡಾಯವಾಗಿ ಅಳವಡಿಸುವುದು. ಹಣ ಪಾವತಿಯನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಿಂದ ಪಡೆಯಲಾದ ಪಾವತಿ ಆದೇಶವಿದ್ದಲ್ಲಿ ಮಾತ್ರ ಕಾಮಗಾರಿಗಳ ಬಿಲ್ ಪಾವತಿಯನ್ನು ಮಾಡುವುದು.

12. ಗಾಂಧಿ ಪಥ ಗ್ರಾಮ ಪಥ ಯೋಜನೆಯನ್ನು ಸ್ವತಂತ್ರ ಮೌಲ್ಯಮಾಪನಕ್ಕೆ ಒಳಪಡಿಸುವುದು.

ಈ ಆದೇಶವನ್ನು ಯೋಜನಾ ಇಲಾಖೆಯ ಟಿಪ್ಪಣಿ ಕಂಡಿಕೆ ಸಂಖ್ಯೆ:ಯೋಇ/33/ ಜಿಯೋವಿ/2016, ದಿನಾಂಕ:22-6-2016ರಲ್ಲಿ ನೀಡಿದ ಸಹಮತಿ ಹಾಗೂ ಆರ್ಥಿಕ ಇಲಾಖೆಯ ಟಿಪ್ಪಣಿ ಕಂಡಿಕೆ ಸಂಖ್ಯೆ:ಆಇ/227/ವೆಚ್ಚ-6/2016 ದಿನಾಂಕ:1-9-2016 ಹಾಗೂ ದಿನಾಂಕ:28-9-2016ರ ಸಚಿವ ಸಂಪುಟದ ನಿರ್ಣಯ ಪ್ರಕರಣ ಸಂಖ್ಯೆ:ಸಿ:479/2016ರಲ್ಲಿ ನೀಡಿದ ಅನುಮೋದನೆಯ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

13/X/16

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಸರ್ಕಾರದ ಪದನಿಮಿತ್ತ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು:**

1. ಮಹಾಲೇಖಪಾಲರು (ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಆಡಿಟ್-1), ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಆಡಿಟ್-2), ಕರ್ನಾಟಕ, ಬೆಂಗಳೂರು.
4. ಮಾನ್ಯ ಮುಖ್ಯ ಮಂತ್ರಿಗಳ ಆಪ್ತ ಕಾರ್ಯದರ್ಶಿಗಳು, ಮುಖ್ಯ ಮಂತ್ರಿಗಳ ಕಾರ್ಯಾಲಯ, ವಿಧಾನ ಸೌಧ, ಬೆಂಗಳೂರು.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು (ಸಚಿವ ಸಂಪುಟ), ವಿಧಾನ ಸೌಧ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು , ವಿಧಾನ ಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.

9. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, (PMU)(IF), 5ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು.
10. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
11. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
12. ವಿಶೇಷಾಧಿಕಾರಿಗಳು (ಜಿ.ಪಂ) ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
13. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
14. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಖಜಾನೆ ಇಲಾಖೆ, ಬೆಂಗಳೂರು.
15. ಉಪ ನಿರ್ದೇಶಕರು, ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಟ್ರಜರಿ ಡಿಪಾರ್ಟ್‌ಮೆಂಟ್, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
16. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿ.ಪಂ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
17. ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಗ್ರಾಮೀಣಾಭಿವೃದ್ಧಿ ಭವನ, 3ನೇ ಮಹಡಿ, ಬೆಂಗಳೂರು-9.
18. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, 2ನೇ ಮಹಡಿ, ಬೆಂಗಳೂರು-9.
19. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
20. ಎಲ್ಲಾ ಪಂಚಾಯತ್ ರಾಜ್ ಇಂಜಿನಿರಿಂಗ್ ವೃತ್ತಗಳ ಅಧೀಕ್ಷಕ ಇಂಜಿನಿಯರುಗಳಿಗೆ.
21. ಎಲ್ಲಾ ಪಿ.ಎಂ.ಜಿ.ಎಸ್.ವೈ ಯೋಜನಾ ವಿಭಾಗಗಳ ಕಾರ್ಯಪಾಲಕ ಇಂಜಿನಿಯರುಗಳಿಗೆ
22. ಎಲ್ಲಾ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗಗಳ ಕಾರ್ಯಪಾಲಕ ಇಂಜಿನಿಯರುಗಳಿಗೆ.
23. ನಿರ್ದೇಶಕರು, ಇ-ಆಡಳಿತ ರವರಿಗೆ ಕಳುಹಿಸುತ್ತಾ ವೆಬ್‌ಸೈಟ್‌ಗೆ ಅಳವಡಿಸಲು ಕೋರಿದೆ.
24. ಸಂಪಾದಕರು ಹಾಗೂ ಸಾರ್ವಜನಿಕ ಸಂಪರ್ಕಾಧಿಕಾರಿಗಳು, ಕರ್ನಾಟಕ ವಿಕಾಸ, ಬಹುಮಹಡಿ ಕಟ್ಟಡ, ಬೆಂಗಳೂರು ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು.
25. ರಕ್ಷಾ ಕಡತ/ ಹೆಚ್ಚುವರಿ ಪ್ರತಿ.